ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಪಾಲಿಕೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE : 1/12/2020

# ಸ್ಥಾಯಿ ಸಮಿತಿಗೆ ಅವಿರೋಧ ಆಯ್ಕೆ

ವಿಜಯವಾಣಿ ಚಿತ್ರ



ಲೆಕ್ಕಪತ್ರ ಸ್ಥಾಯಿ ಸಮಿತಿಗೆ ಆಯ್ಕೆಯಾದ ಮಮತಾ ವಾಸುದೇವ್ ಹಾಗೂ ತೋಟಗಾರಿಕೆ ಸ್ಥಾಯಿ ಸಮಿತಿಗೆ ಆಯ್ಕೆಯಾದ ಜಿ. ಕೃಷ್ಣಮೂರ್ತಿ ಅವರಿಗೆ ಪಾಲಿಕೆ ಕೇಂದ್ರ ಕಚೇರಿಯಲ್ಲಿ ಮೇಯರ್ ಗೌತಮ್‌ಕುಮಾರ್ ಅಭಿನಂದಿಸಿದರು. ಶಾಸಕ ಸತೀಶ್‌ರೆಡ್ಡಿ ಉಪಸ್ಥಿತರಿದ್ದರು.

**» ಬಿಜೆಪಿ, ಕಾಂಗ್ರೆಸ್‌ಗೆ ತಲಾ ಒಂದು ಸ್ಥಾನ**

ಬೆಂಗಳೂರು: ಪಾಲಿಕೆ ಲೆಕ್ಕಪತ್ರ ಹಾಗೂ ತೋಟಗಾರಿಕೆ ಇಲಾಖೆ ಸ್ಥಾಯಿ ಸಮಿತಿಗಳಲ್ಲಿ ಖಾಲಿಯಿದ್ದ ಒಂದೊಂದು ಸ್ಥಾನಕ್ಕೆ ಸದಸ್ಯರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಬಿಬಿಎಂಪಿ ಕೇಂದ್ರ ಕಚೇರಿಯಲ್ಲಿ ಸೋಮವಾರ ನಡೆದ ಚುನಾವಣೆಯಲ್ಲಿ ಲೆಕ್ಕಪತ್ರ ಸ್ಥಾಯಿ ಸಮಿತಿಗೆ ಬಿಜೆಪಿಯ ಮಮತಾ ವಾಸುದೇವ್ ಹಾಗೂ ಕಾಂಗ್ರೆಸ್‌ನ ಜಿ. ಕೃಷ್ಣಮೂರ್ತಿ ಆಯ್ಕೆಯಾದರು. ಪ್ರಾದೇಶಿಕ ಆಯುಕ್ತ ಎಂ.ವಿ. ಪ್ರಸಾದ್‌ಚುನಾವಣಾ ಪ್ರಕ್ರಿಯೆ ನಡೆಸಿಕೊಟ್ಟರು.

12 ಸ್ಥಾಯಿ ಸಮಿತಿಗಳಲ್ಲಿ 11 ಸಮಿತಿಗಳಿಗೆ ಅಧ್ಯಕ್ಷರನ್ನು ಆಯ್ಕೆ ಮಾಡಲಾಗಿದೆ. ಲೆಕ್ಕಪತ್ರ ಸ್ಥಾಯಿ ಸಮಿತಿ ಅಧ್ಯಕ್ಷ ಸ್ಥಾನ ಖಾಲಿಯಿದ್ದು, ಮಮತಾ ಅಧ್ಯಕ್ಷರಾಗಲಿದ್ದಾರೆ ಎನ್ನಲಾಗಿದೆ.